ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE: 27/1/21

# ದಳ-ಕಮಲ ಮೇಲ್ಮನೆ ಮೈತ್ರಿ?

## ಹೊರಟ್ಟಿಗೆ ಸಭಾಪತಿ ಸ್ಥಾನ ಬಹುತೇಕ ಖಚಿತ

▫ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಬದಲಾದ ರಾಜಕೀಯ ಸನ್ನಿವೇಶದಲ್ಲಿ ಬಿಜೆಪಿ ಮತ್ತು ಜೆಡಿಎಸ್ ನಡುವಿನ ಮೈತ್ರಿಗೆ ಶೀಘ್ರದಲ್ಲೇ ಮೇಲ್ಮನೆ ಸಾಕ್ಷಿಯಾಗಲಿದೆ. ವಿಧಾನ ಪರಿಷತ್ತಿನಲ್ಲಿ ಬಿಜೆಪಿ ಬಹುದೊಡ್ಡ ಪಕ್ಷವಾಗಿದ್ದರೂ, ಸ್ವಂತ ಬಲದ ಮೇಲೆ ಸಭಾಪತಿ, ಉಪಸಭಾಪತಿ ಆಯ್ಕೆ ಮಾಡುವ ಅವಕಾಶಗಳಿಲ್ಲ. ಹಾಗಾಗಿ ಜೆಡಿಎಸ್ ಸಖ್ಯ ಅನಿವಾರ್ಯವಾಗಿದೆ. ಜೆಡಿಎಸ್ ಕೂಡ ಇದರ ಲಾಭ ಪಡೆಯಲು ಮುಂದಾಗಿದೆ.

ಕಾಂಗ್ರೆಸ್‌ನ ಪ್ರತಾಪಚಂದ್ರ ಶೆಟ್ಟಿಯವರನ್ನು ಕೆಳಗಿಳಿಸಬೇಕೆಂಬ ಅಜೆಂಡಾ ಇಟ್ಟುಕೊಂಡಿದ್ದ ಬಿಜೆಪಿ ಅವಿಶ್ವಾಸ ಗೊತ್ತುವಳಿ ಮಂಡಿಸಿತ್ತು. ಜೆಡಿಎಸ್ ಕೂಡ ಕೈಜೋಡಿಸಿತು.

**ದೇವೇಗೌಡ ಮಾತುಕತೆ**

**ಮೇಲ್ಮನೆ ಸಭಾಪತಿ ಆಯ್ಕೆ ಕುರಿತು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಜತೆ ಮಾತುಕತೆ ನಡೆಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ.**

ಕಳೆದ ಅಧಿವೇಶನದಲ್ಲಿನ ಈ ಬೆಳವಣಿಗೆ ಪ್ರತಾಪಚಂದ್ರ ಶೆಟ್ಟಿ ಕುರ್ಚಿಯಿಂದ ಕೆಳಗಿಳಿಯುವ ಸನ್ನಿವೇಶ ಸೃಷ್ಟಿಸಿದೆ. ಈವರೆಗಿನ ಬೆಳವಣಿಗೆ ಜೆಡಿಎಸ್ ನಾಯಕರ ಮಾತಿನ ವರಸೆ ನೋಡಿದರೆ ಸಭಾಪತಿ ಸ್ಥಾನ ಸಿಗುವ ವಿಶ್ವಾಸ ಹೊಂದಿವೆ. ಜೆಡಿಎಸ್‌ನಲ್ಲಿ ಹಿರಿಯ ನಾಯಕರಾಗಿರುವ ಬಸವರಾಜ ಹೊರಟ್ಟಿ ಅವರಿಗೆ ಸಭಾಪತಿ ಸ್ಥಾನ ಒಲಿಯುವ ಸಾಧ್ಯತೆಗಳು ದಟ್ಟವಾಗಿವೆ. ಒಂದೆರಡು ದಿನಗಳಲ್ಲಿ ಸಭಾಪತಿ-ಉಪಸಭಾಪತಿ ಆಯ್ಕೆ ವಿಚಾರವಾಗಿ ಜೆಡಿಎಸ್ ಸಭೆ ನಡೆಯಲಿದೆ.



ಮೈತ್ರಿ ಧರ್ಮ ಪಾಲನೆ ಆಗಿರಲಿಲ್ಲ: 2018ರಲ್ಲೇ ಮೈತ್ರಿ ಸರ್ಕಾರದ ಅವಧಿಯಲ್ಲಿ ಬಸವರಾಜ ಹೊರಟ್ಟಿ ಸಭಾಪತಿ ಆಗಬೇಕಿತ್ತು. ಕಾಂಗ್ರೆಸ್ ಹಾಗೂ ಜೆಡಿಎಸ್ ಸಮ್ಮಿಶ್ರ ಸರ್ಕಾರದ ಅವಧಿಯಲ್ಲಿ ಕೆಳಮನೆಯಲ್ಲಿ ಸಭಾಧ್ಯಕ್ಷರ ಸ್ಥಾನಕ್ಕೆ ಜೆಡಿಎಸ್ ಬೆಂಬಲ ನೀಡಿತ್ತು. ಆದರೆ, ಅದೇ ಮೈತ್ರಿ ಧರ್ಮ ಮೇಲ್ಮನೆಯಲ್ಲಿ ಪಾಲನೆಯಾಗಲಿಲ್ಲ. ಮೇಲ್ಮನೆಯಲ್ಲೂ ಕಾಂಗ್ರೆಸ್ ಪ್ರತಾಪ ಚಂದ್ರ ಶೆಟ್ಟಿ ಅವರನ್ನು ಸಭಾಪತಿಯನ್ನಾಗಿ ಮಾಡುವಲ್ಲಿ ಯಶಸ್ವಿಯಾಗಿತ್ತು.

### ಬಿಜೆಪಿ ಸಭೆ ಇಂದು

ವಿಧಾನ ಪರಿಷತ್ತಿನಲ್ಲಿ ಸಭಾಪತಿ ವಿರುದ್ಧ ಮಂಡಿಸಿದ ಅವಿಶ್ವಾಸ ಸೂಚನೆ ದೊಡ್ಡ ರಾದ್ಧಾಂತ ಸೃಷ್ಟಿಸಿದ ಹಿನ್ನೆಲೆಯಲ್ಲಿ ಆ ಕುರಿತು ಚರ್ಚಿಸಲು ಬಿಜೆಪಿ ಎಂಎಲ್‌ಸಿಗಳ ಸಭೆ ಬುಧವಾರ ನಡೆಯಲಿದೆ. ಸಭಾಪತಿ ಮತ್ತು ಉಪ ಸಭಾಪತಿ ಈ ಎರಡೂ ಸ್ಥಾನಗಳ ವಿಚಾರದಲ್ಲಿ ಬಿಜೆಪಿ ಮತ್ತು ಜೆಡಿಎಸ್ ನಡುವೆ ಕೊಡು-ಕೊಳ್ಳುವ ವ್ಯವಹಾರಕ್ಕೆ ಸಿಎಂ ಒಲವು ತೋರಿದ್ದಾರೆ. ಸಭಾಪತಿ ರಾಜೀನಾಮೆ ನೀಡಿದ ನಂತರ ಆ ಸ್ಥಾನದ ಬಗ್ಗೆ ಯೋಚನೆ ಮಾಡಲು ತೀರ್ಮಾನಿಸಲಾಗಿದ್ದು, ಉಪಸಭಾಪತಿ ಸ್ಥಾನಕ್ಕೆ ಅಭ್ಯರ್ಥಿ ಅಂತಿಮಗೊಳಿಸುವ ಬಗ್ಗೆ ಬುಧವಾರದ ಸಭೆಯಲ್ಲಿ ಚರ್ಚೆ ನಡೆಯಲಿದೆ.

ಬಿಜೆಪಿಯಲ್ಲಿ ಭಾರೀ ಪೈಪೋಟಿ: ಉಪಸಭಾಪತಿ ಸ್ಥಾನಕ್ಕೆ ಬಿಜೆಪಿಯಲ್ಲಿ ಪೈಪೋಟಿ ಶುರುವಾಗಿದೆ. ಅರುಣ್ ಶಹಾಪುರ, ಶಶಿಲ್ ನಮೋಶಿ, ವೈ.ಎ. ನಾರಾಯಣಸ್ವಾಮಿ, ಮಹಾಂತೇಶ ಕವಟಗಿಮಠ ಹೆಸರು ಪ್ರಮುಖವಾಗಿ ಕೇಳಿ ಬರುತ್ತಿವೆ.